ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

**ಒಟ್ಟು ಪ್ರಶ್ನೆಗಳು – ೨೪**

**ಪಟ್ಟಿ – ೦೧**

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೈದನೇ ಅಧಿವೇಶನ

**ಸೋಮವಾರ, ದಿನಾಂಕ : ೨೩ನೇ ಜೂನ್, ೨೦೧೪**

---

## ಸಮೂಹ – I

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಹಾಗೂ ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು

೨. ಸಾರಿಗೆ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೫. ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು

೬. ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು

---

## ಆರೋಗ್ಯ ಕೇಂದ್ರಗಳಲ್ಲಿ ವೈದ್ಯರುಗಳ ಕೊರತೆ

**ಶ್ರೀ ಸೋಮಣ್ಣ ಮ ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :-**

೧ (೦೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಾವೇರಿ ಜಿಲ್ಲೆಯ ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರುಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ವೈದ್ಯರುಗಳ ಕೊರತೆಯಿಂದ ಅಲ್ಲಿನ ಜನತೆಗೆ ತೊಂದರೆಯಾಗುವುದಿಲ್ಲವೇ ;

(ಇ) ಈ ಬಗ್ಗೆ ಇಲಾಖೆಯು ವೈದ್ಯರ ನೇಮಕಾತಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿದೆಯೇ ;

(ಈ) ಹಾಗಿದ್ದಲ್ಲಿ ವೈದ್ಯರುಗಳನ್ನು ತುಂಬಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

## ವಿವಿಧ ಆಸ್ಪತ್ರೆಗಳು

**ಶ್ರೀ ವೀರಕುಮಾರ್ ಅಪ್ಪಾಸೋ ಪಾಟೀಲ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-**

೨ (೧೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾಂ ಜಿಲ್ಲೆಯಲ್ಲಿರುವ ತಾಲ್ಲೂಕು ಆಸ್ಪತ್ರೆ, ಪ್ರಾಥಮಿಕ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಘಟಕ ಮತ್ತು ಸಮುದಾಯ ಕೇಂದ್ರಗಳ ಸಂಖ್ಯೆ ಎಷ್ಟು ;

(ಆ) ಸದರಿ ಜಿಲ್ಲೆಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸ್ಥಾಪನೆ ಕುರಿತು ರಾಜ್ಯ ಸರ್ಕಾರದ ವತಿಯಿಂದ ಘೋಷಣೆ ಮಾಡಲಾಗಿದ್ದು ಈ ಸಂಬಂಧ ಇಲ್ಲಿಯವರೆಗೆ ಕೈಗೊಂಡಿರುವ ಕ್ರಮಗಳು ಯಾವುವು (ವಿವರ ನೀಡುವುದು) ?

## ಹುಚ್ಚು ನಾಯಿ ಮತ್ತು ಹಾವು ಕಡಿತಕ್ಕೆ ಔಷಧದ ಕೊರತೆ

**ಶ್ರೀ ಅಶ್ವಥ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೩. (೧೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹುಚ್ಚು ನಾಯಿ ಮತ್ತು ಹಾವು ಕಡಿತಕ್ಕೆ ಚಿಕಿತ್ಸೆ ನೀಡಲು ರಾಜ್ಯದಲ್ಲಿ ಎಷ್ಟು ಆರೋಗ್ಯ ಕೇಂದ್ರಗಳಿವೆ; ರಾಜ್ಯದ ಯಾವ ಯಾವ ತಾಲ್ಲೂಕುಗಳಲ್ಲಿ ಈ ಸೌಲಭ್ಯ ಇರುವುದಿಲ್ಲ ;

(ಆ) ಹುಚ್ಚು ನಾಯಿ ಮತ್ತು ಹಾವು ಕಡಿತದ ಔಷಧಕ್ಕೆ ಕೊರತೆಯಿದೆಯೇ; ಇದ್ದಲ್ಲಿ ಕಾರಣವೇನು ;

(ಇ) ಇಂತಹ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರು ಹಾಗೂ ಸಿಬ್ಬಂದಿ ಕೊರತೆ ಇರುವುದೆ; ಇದ್ದಲ್ಲಿ ಕಾರಣವೇನು; ಈ ಕೊರತೆಯನ್ನು ನೀಗಿಸಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ;

(ಈ) ೨೦೧೩ ರಿಂದ ಇಲ್ಲಿಯವರೆಗೆ ರಾಜ್ಯದಲ್ಲಿ ಹುಚ್ಚು ನಾಯಿ ಕಡಿತದಿಂದ ಚಿಕಿತ್ಸೆ ಲಭಿಸದೇ ಮೃತಪಟ್ಟವರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು);

(ಉ) ಇದೇ ಅವಧಿಯಲ್ಲಿ ರಾಜ್ಯದಲ್ಲಿ ಹಾವು ಕಚ್ಚಿ ಮೃತಪಟ್ಟವರ ಸಂಖ್ಯೆ ಎಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು) ;

(ಊ) ಹಾವು ಮತ್ತು ನಾಯಿ ಕಡಿತದ ಲಸಿಕೆಗಳನ್ನು ಪಲ್ಸ್ ಪೋಲಿಯೊ ಲಸಿಕೆ ಮಾದರಿಯಲ್ಲಿ, ರಾಷ್ಟ್ರೀಯ ಅಭಿಯಾನ ವ್ಯಾಪ್ತಿಗೆ ತರುವ ಪ್ರಯತ್ನ ಯಾವ ಹಂತದಲ್ಲಿದೆ (ವಿವರ ನೀಡುವುದು) ?

## ರಾಜೀವ್ ಆರೋಗ್ಯ ಭಾಗ್ಯ ಯೋಜನೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-**

೪ (೧೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜೀವ್ ಆರೋಗ್ಯ ಭಾಗ್ಯದ ಫಲಾನುಭವಿಗಳ ಸವಲತ್ತುಗಳಾವುವು; ರಾಜೀವ್ ಆರೋಗ್ಯ ಭಾಗ್ಯ ಯೋಜನೆಯನ್ನು ಎಲ್ಲಾ ಖಾಸಗಿ ನೋಂದಾಯಿತ ಆಸ್ಪತ್ರೆಗಳು ಅನುಷ್ಠಾನ ಮಾಡಿವೆಯೇ ;

(ಆ) ಸದರಿ ಯೋಜನೆಯಡಿ ಇಲ್ಲಿಯವರೆಗೆ ಎಷ್ಟು ಶಸ್ತ್ರ ಚಿಕಿತ್ಸೆಗಳು ನಡೆದಿವೆ (ಪ್ರಕರಣಗಳ ಸಂಖ್ಯೆಯನ್ನು ಜಿಲ್ಲಾ, ತಾಲ್ಲೂಕುವಾರು ವಿವರ ನೀಡುವುದು) ;

(ಇ) ಸದರಿ ಯೋಜನೆಯನ್ನು ಅನುಷ್ಠಾನ ಮಾಡಲು ಖಾಸಗಿ ಆಸ್ಪತ್ರೆಗಳು ಹಿಂದೆ ಸರಿಯುತ್ತಿರುವುದು ನಿಜವೇ ;

(ಈ) ನಿಜವಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

## ಖಾಸಗಿ ಪಡಿತರ ಅಂಗಡಿಗಳಲ್ಲಿ ಪಡಿತರ ವಿತರಣೆಯ ಸ್ಥಗಿತ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-**

೫ (೧೮) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಪಡಿತರ ಮಾರಾಟ ಕೇಂದ್ರಗಳ ಸಂಖ್ಯೆ ಎಷ್ಟು (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು) ;

(ಆ) ಈ ಮಾರಾಟ ಕೇಂದ್ರಗಳಲ್ಲಿ ಸಹಕಾರಿ ಮೂಲಕ ನಡೆಯುವ ಕೇಂದ್ರಗಳ ಸಂಖ್ಯೆ ಎಷ್ಟು (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು) ;

(ಇ) ಖಾಸಗಿ ವ್ಯಕ್ತಿಗಳಿಗೆ ನೀಡಿರುವ ಮಾರಾಟ ಕೇಂದ್ರಗಳ ಸಂಖ್ಯೆ ಎಷ್ಟು (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು) ;

(ಈ) ಖಾಸಗಿ ವ್ಯಕ್ತಿಗಳ ಮೂಲಕ ಪಡಿತರ ಅಂಗಡಿ ನಡೆಸುವುದನ್ನು ನಿಲ್ಲಿಸಲು ಸರ್ಕಾರ ಕೈಗೊಂಡ ಕ್ರಮಗಳೇನು (ವಿವರ ನೀಡುವುದು)?

## ವಿಶ್ವಕರ್ಮ ಅಭಿವೃದ್ಧಿ ಮಂಡಳಿಯ ಕಾರ್ಯ ಯೋಜನೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-**

೬ (೨೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಶ್ವಕರ್ಮ ಅಭಿವೃದ್ಧಿ ಮಂಡಳಿಯ ಕಾರ್ಯ ಯೋಜನೆಯ ಕಾರ್ಯಕ್ರಮಗಳೇನು ;

(ಆ) ಇದಕ್ಕಾಗಿ ಸರ್ಕಾರ ಎಷ್ಟು ಹಣ ತೆಗೆದಿರಿಸಿದೆ ;

(ಇ) ಸದರಿ ಮಂಡಳಿಯ ಪ್ರಸ್ತುತ ಅಧ್ಯಕ್ಷರಾರು ;

(ಈ) ವಿಶ್ವಕರ್ಮ ನಿಗಮ/ಮಂಡಳಿ ಎಲ್ಲಿ ಕಾರ್ಯನಿರ್ವಹಿಸುತ್ತಿದೆ (ವಿವರ ನೀಡುವುದು) ?

## ಹೊರಗುತ್ತಿಗೆ ಆಧಾರದ ನೌಕರರ ಸಮಸ್ಯೆಗಳು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭ (೧೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗದ ಇಲಾಖೆಯಲ್ಲಿ ಹಾಸ್ಟೆಲ್‌ಗಳು ಮತ್ತು ವಸತಿ ಶಾಲೆಗಳಲ್ಲಿ ದುಡಿಯುತ್ತಿರುವ ಹೊರಗುತ್ತಿಗೆ ನೌಕರರಿಗೆ ಕನಿಷ್ಠ ವೇತನವನ್ನಾದರೂ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಆ) ಹೊರಗುತ್ತಿಗೆಯಲ್ಲಿ ದುಡಿಯುತ್ತಿರುವ ಒಟ್ಟು ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಇ) ಸದರಿಯವರಿಗೆ ನೀಡುವ ಮಾಸಿಕ ವೇತನವೆಷ್ಟು ;

(ಈ) ಬಡನೌಕರರ ಸಮಸ್ಯೆ ಪರಿಹಾರಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು (ವಿವರ ನೀಡುವುದು) ?

## BIMS ಕೋರ್ಸ್‌ಗಳು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-**

೮ (೨೩) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾಂ ಇನ್‌ಸ್ಟಿಟ್ಯೂಟ್ ಆಫ್ ಮೆಡಿಕಲ್ ಸೈನ್ಸ್‌ನಲ್ಲಿ ಸದ್ಯ ಇರುವ ಕೋರ್ಸ್‌ಗಳು ಯಾವುವು (ಪದವಿ ಸ್ನಾತಕೋತ್ತರ, Super Specialization) ;

(ಆ) ಈ ಕೋರ್ಸ್‌ಗಳನ್ನು ಬೋಧಿಸುವ ಎಲ್ಲ ಬೋಧಕ ಸಿಬ್ಬಂದಿಯ ಮಾಹಿತಿ ನೀಡುವುದು ;

(ಇ) ಮಂಜೂರಾದ ಹುದ್ದೆಗಳು ಎಷ್ಟು : ಭರ್ತಿಯಾಗಿರುವ ಹುದ್ದೆಗಳು ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು (ಮಾಹಿತಿ ನೀಡುವುದು) ;

(ಈ) ಈ ವಿದ್ಯಾಲಯಕ್ಕೆ ಬೇಕಾಗಿರುವ ಮೂಲಭೂತ ಸೌಕರ್ಯಗಳೇನು; ಈಗಾಗಲೇ ನಿರ್ಮಾಣಗೊಂಡಿರುವ ಮೂಲಭೂತ ಸೌಕರ್ಯಗಳಾವುವು (ಸಂಪೂರ್ಣ ವಿವರ ನೀಡುವುದು) ;

(ಉ) ಕಳೆದ ೦೪ ವರ್ಷಗಳಲ್ಲಿ ಈ ಸಂಸ್ಥೆಗೆ ಒದಗಿಸಿರುವ ಅನುದಾನ, ಬಳಕೆಯಾಗಿರುವ ಅನುದಾನದ ಕೊರತೆ ಹಾಗೂ ಹೆಚ್ಚಳವಾಗಿ ಉಳಿದಿರುವ ಅನುದಾನ ಅಥವಾ ಮುಂದಿನ ವರ್ಷಕ್ಕೆ ಮುಂದುವರೆದಿರುವ ಅನುದಾನದ ಬಗ್ಗೆ ಸಂಪೂರ್ಣ ವಿವರ ನೀಡುವುದು;

(ಊ) ಬಿಜಾಪುರ ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಸರ್ಕಾರಿ ವೈದ್ಯಕೀಯ ಮಹಾವಿದ್ಯಾಲಯಗಳನ್ನು ಸ್ಥಾಪಿಸಲು ಉದ್ದೇಶಿಸಿದೆಯೇ;

(ಋ) ಈ ನಿಟ್ಟಿನಲ್ಲಿ ತೆಗೆದುಕೊಂಡ ಕ್ರಮಗಳೇನು ;

(ೠ) ಬಿಜಾಪುರದಲ್ಲಿ ಮಹಿಳಾ ವೈದ್ಯಕೀಯ ಮಹಾವಿದ್ಯಾಲಯ ಸ್ಥಾಪನೆಯ ಬೇಡಿಕೆ ಇದ್ದು, ಸರ್ಕಾರ ಮಂಜೂರಾತಿಗೆ ಕ್ರಮವಹಿಸುವುದೇ?

## ವಸತಿ ನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳ ಕ್ಷೌರಕ್ಕಾಗಿ ಅನುದಾನ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-**

೯(೨೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಅಧಿವೇಶನದಲ್ಲಿ ರಾಜ್ಯದಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿರುವ ವಸತಿ ನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಗಂಡು ಮಕ್ಕಳ ಕ್ಷೌರಕ್ಕಾಗಿ ಸರ್ಕಾರ ನೀಡುತ್ತಿರುವ ಅನುದಾನವನ್ನು ಹೆಚ್ಚಿಸುವುದಾಗಿ ಹೇಳಲಾಗಿದ್ದು, ಅನುದಾನ ಪ್ರಮಾಣವನ್ನು ಹೆಚ್ಚಿಸಲಾಗಿದೆಯೇ ;

(ಆ) ಹೆಚ್ಚಿಸಿದ್ದಲ್ಲಿ, ಎಷ್ಟು ಪ್ರಮಾಣದಲ್ಲಿ ಹೆಚ್ಚಿಸಲಾಗಿದೆ (ಆದೇಶದ ಪ್ರತಿಯನ್ನು ನೀಡುವುದು) ;

(ಇ) ಇಲ್ಲವಾದಲ್ಲಿ ವಿಳಂಬಕ್ಕೆ ಕಾರಣಗಳೇನು?

## ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ಭೂ ಒಡೆತನ ಯೋಜನೆ.

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೧೦(೨೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯಲ್ಲಿ ಡಾ: ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ಭೂ ಒಡೆತನ ಯೋಜನೆಯಡಿಯಲ್ಲಿ ೨೦೦೮–೦೯ ರಿಂದ ಇಲ್ಲಿಯವರೆಗೂ ಸ್ವೀಕೃತವಾದ ಒಟ್ಟು ಅರ್ಜಿಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ವಿವರ ನೀಡುವುದು);

(ಆ) ೨೦೦೮–೦೯ ರಿಂದ ಪ್ರಸಕ್ತ ಸಾಲಿನವರೆಗೂ ಎಷ್ಟು ಜಮೀನನ್ನು ಖರೀದಿಸಲಾಗಿದೆ; ಇದಕ್ಕೆ ವ್ಯಯಿಸಲಾದ ಅನುದಾನ ಎಷ್ಟು (ವಿವರಗಳನ್ನು ನೀಡುವುದು) ;

(ಇ) ಅವುಗಳಲ್ಲಿ ಜಮೀನು ಮಂಜೂರು ಮಾಡಲಾದ ಪ್ರಕರಣಗಳು ಎಷ್ಟು; ಫಲಾನುಭವಿಗಳ ವಿವರಗಳನ್ನು ನೀಡುವುದು;

(ಈ) ಜಮೀನು ಮಂಜೂರು ಮಾಡಲಾಗದ ಎಷ್ಟು ಪ್ರಕರಣಗಳು ಬಾಕಿ ಇರುತ್ತವೆ (ವಿವರಗಳನ್ನು ನೀಡುವುದು) ಬಾಕಿ ಇರುವುದಕ್ಕೆ ಕಾರಣಗಳೇನು ;

(ಉ) ಜಮೀನು ಮಂಜೂರು ಆದಾಗ್ಯೂ ಅವರ ಹೆಸರಿಗೆ ಖಾತೆ ಬದಲಾವಣೆ ಮಾಡಲಾಗದ ಪ್ರಕರಣಗಳು ಬೆಳಕಿಗೆ ಬಂದಿವೆಯೇ; ಬಂದಿದ್ದಲ್ಲಿ, ಇದಕ್ಕೆ ಕಾರಣಗಳೇನು?

## "ಅನ್ನಭಾಗ್ಯ" ಯೋಜನೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು):-**

೧೧ (೨೫) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಜಾರಿಯಲ್ಲಿರುವ ಅನ್ನಭಾಗ್ಯ ಯೋಜನೆಗೆ ಸಾಕಾಗುವಷ್ಟು ಅಕ್ಕಿಯನ್ನು ಸರ್ಕಾರ ಯಾವ ರಾಜ್ಯಗಳಿಂದ ಆಮದು ಮಾಡಿಕೊಳ್ಳುತ್ತಿದೆ ;

(ಆ) ಹೊರ ರಾಜ್ಯಗಳಿಂದ ಆಮದು ಮಾಡಿಕೊಳ್ಳುವ ಪ್ರತಿ ಟನ್ ಅಕ್ಕಿಗೆ ಸರ್ಕಾರ ತೆರಬೇಕಾದ ಮೊತ್ತವೆಷ್ಟು ;

(ಇ) ಪಡಿತರ ಅಕ್ಕಿಗೆ ಸರ್ಕಾರ ತಿಂಗಳಿಗೆ ಖರ್ಚು ಮಾಡುವ ಮೊತ್ತವೆಷ್ಟು (ವಿವರಣೆ ನೀಡುವುದು) ;

(ಈ) ಹೊರ ರಾಜ್ಯದಿಂದ ತರಿಸುವ ಅಕ್ಕಿಯು ಮುಗ್ಗಲು (ಚೆನ್ನಾಗಿರುವುದಿಲ್ಲ) ಆಗಿರುತ್ತದೆ ಎಂಬ ಗ್ರಾಹಕರ ದೂರುಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದಲ್ಲಿ, ಇದಕ್ಕೆ ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ ;

(ಉ) ರಾಜ್ಯದಲ್ಲಿನ ಭತ್ತದ ಬೆಳೆಯ ಪ್ರಮಾಣ ಎಷ್ಟು; ರಾಜ್ಯದಲ್ಲಿ ಸಿಗುವ ಅಕ್ಕಿಯಿಂದ ಎಲ್ಲಾ ಬಿ.ಪಿ.ಎಲ್. ಕಾರ್ಡುದಾರರಿಗೆ ಹಂಚಲು ಸಾಧ್ಯವಿಲ್ಲವೆ;

(ಊ) ಈ ಆರ್ಥಿಕ ಹೊರೆಯನ್ನು ನೀಗಿಸಲು ಸರ್ಕಾರ ರೂಪಿಸಿದ ಯೋಜನೆಗಳಾವುವು ?

## ಸಾರ್ವಜನಿಕ ಆಸ್ಪತ್ರೆಯಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳು.

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-**

೧೨ (೨೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಪ್ಪಳ ಜಿಲ್ಲೆಯಲ್ಲಿನ ಸಾರ್ವಜನಿಕ ಆಸ್ಪತ್ರೆಯಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳ ಸಂಖ್ಯೆ ಎಷ್ಟು (ವಿವರ ನೀಡುವುದು) ;

(ಆ) ಜಿಲ್ಲೆಯಲ್ಲಿ ಎಷ್ಟು ಮಕ್ಕಳ ತಜ್ಞರ ಹುದ್ದೆಗಳು ಮಂಜೂರಾಗಿವೆ (ತಾಲ್ಲೂಕುವಾರು ವಿವರ ನೀಡುವುದು) ;

(ಇ) ಇವುಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಭರ್ತಿಯಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ವಿವರ ನೀಡುವುದು) ;

(ಈ) ಪ್ರಮುಖ ಹುದ್ದೆಗಳು ಖಾಲಿ ಇರುವುದರಿಂದ ಜಿಲ್ಲೆಯಲ್ಲಿನ ರೋಗಿಗಳು ಪರದಾಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಆಸ್ಪತ್ರೆಗಳು

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-**

೧೩(೨೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ

(ಅ) ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಯಲ್ಲಿರುವ ಜಿಲ್ಲಾ ಆಸ್ಪತ್ರೆ, ತಾಲ್ಲೂಕು ಆಸ್ಪತ್ರೆ, ಪ್ರಾಥಮಿಕ ಆರೋಗ್ಯ ಕೇಂದ್ರಗಳೆಷ್ಟು (ತಾಲ್ಲೂಕುವಾರು ಮಾಹಿತಿ ನೀಡುವುದು) ;

(ಆ) ಈ ಆಸ್ಪತ್ರೆಗಳಿಗೆ ಮಂಜೂರಾಗಿರುವ ವೈದ್ಯರ ಹುದ್ದೆಗಳೆಷ್ಟು; ಖಾಲಿ ಇರುವ ಹುದ್ದೆಗಳೆಷ್ಟು (ತಾಲ್ಲೂಕುವಾರು ವಿವರ ನೀಡುವುದು);

(ಇ) ಭಾರಿ ಪ್ರಮಾಣದಲ್ಲಿ ವೈದ್ಯರ ಹುದ್ದೆಗಳು ಖಾಲಿ ಉಳಿದಿರುವುದರಿಂದ ರೋಗಿಗಳಿಗೆ ಸಕಾಲದಲ್ಲಿ ಚಿಕಿತ್ಸೆ ನೀಡಲು ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸಮಸ್ಯೆ ಪರಿಹಾರಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಎರಡೂ ಜಿಲ್ಲೆಗಳಲ್ಲಿ ಖಾಲಿ ಉಳಿದಿರುವ ಹುದ್ದೆಗಳ ಭರ್ತಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು?

## ರಾಜೀವ್‌ಗಾಂಧಿ ವೈದ್ಯಕೀಯ ವಿಜ್ಞಾನ ಕಾಲೇಜು

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-**

೧೪ (೩೨) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗುಲ್ಬರ್ಗಾದಲ್ಲಿ ರಾಜೀವ್‌ಗಾಂಧಿ ವೈದ್ಯಕೀಯ ವಿಜ್ಞಾನ ಕಾಲೇಜಿನ ಪ್ರಾದೇಶಿಕ ಕೇಂದ್ರ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಆ) ಈ ಕೇಂದ್ರ ಸ್ಥಾಪನೆಗಾಗಿ ಗುಲ್ಬರ್ಗಾದಲ್ಲಿ ನಿವೇಶನ ಗುರುತಿಸಲಾಗಿದೆಯೇ; ಗುರುತಿಸಿದ್ದಲ್ಲಿ ವಿವರಗಳನ್ನು ನೀಡುವುದು;

(ಇ) ಹೈದ್ರಾಬಾದ್ ಕರ್ನಾಟಕ ಪ್ರದೇಶದಲ್ಲಿರುವ ವೈದ್ಯಕೀಯ ಕಾಲೇಜುಗಳ ಅನುಕೂಲಕ್ಕಾಗಿ ಗುಲ್ಬರ್ಗಾದಲ್ಲಿ ಈ ಕೇಂದ್ರ ಪ್ರಾರಂಭವಾಗುವುದು ಯಾವಾಗ ?

## ಗ್ರಾಮೀಣ ಸಾರಿಗೆ ಬಸ್ಸುಗಳ ಸೌಲಭ್ಯ

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-**

೧೫ (೩೦) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕೆಲವು ಹಳ್ಳಿಗಳಿಗೆ ಬಸ್ ಸೌಕರ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಭಾಗಗಳಲ್ಲಿ ಎಷ್ಟು ಹಳ್ಳಿಗಳಿಗೆ ಗ್ರಾಮೀಣ ಸಾರಿಗೆ ಬಸ್ಸುಗಳನ್ನು ಒದಗಿಸಲಾಗಿದೆ (ತಾಲ್ಲೂಕುವಾರು ಮಾಹಿತಿ ನೀಡುವುದು) ?

## ವೈದ್ಯಕೀಯ ಕಾಲೇಜುಗಳಲ್ಲಿ ಸೀಟುಗಳ ಲಭ್ಯತೆ

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೧೬ (೩೪) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ (೨೦೧೪–೧೫) ರಾಜ್ಯದ ಡೀಮ್ಡ್ ವಿಶ್ವವಿದ್ಯಾಲಯಗಳೂ ಸೇರಿದಂತೆ ಎಲ್ಲಾ ವೈದ್ಯ ಕಾಲೇಜುಗಳಲ್ಲಿ ಲಭ್ಯವಿರುವ ಸೀಟುಗಳ ಸಂಖ್ಯೆ ಎಷ್ಟು; (ಕಾಲೇಜುವಾರು ಸೀಟು ಸಂಖ್ಯೆಯ ಸಮಗ್ರ ವಿವರ ನೀಡುವುದು)

(ಆ) ಸರ್ಕಾರಿ ವೈದ್ಯ ಕಾಲೇಜುಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ವೈದ್ಯ ಕಾಲೇಜುಗಳಲ್ಲಿ ಲಭ್ಯವಿರುವ ಸರ್ಕಾರಿ ಕೋಟಾದ ಸೀಟುಗಳ ಸಂಖ್ಯೆ ಎಷ್ಟು (ಕಾಲೇಜುವಾರು ವಿವರ ನೀಡುವುದು) ;

(ಇ) ಭಾರತೀಯ ವೈದ್ಯ ಶಿಕ್ಷಣ ಮಂಡಳಿ ಈಚೆಗೆ ಕೈಗೊಂಡಿರುವ ತೀರ್ಮಾನದಿಂದ ರಾಜ್ಯದ ವೈದ್ಯಕೀಯ ಶಿಕ್ಷಣ ವ್ಯವಸ್ಥೆ ಮೇಲಾಗಿರು'ವ ಪರಿಣಾಮಗಳ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಈ ಹಿಂದಿನ ವರ್ಷಗಳಲ್ಲಿ ಖಾಸಗಿ ವೈದ್ಯ ಕಾಲೇಜುಗಳು, ಸರ್ಕಾರಿ ಕೋಟಾದ ಸೀಟುಗಳ ಕಬಳಿಕೆ ಮತ್ತು ಅಂತಹ ಸೀಟುಗಳ

ವಾಪಸಾತಿಗಾಗಿ ಇಲಾಖೆ ಇಲ್ಲಿಯವರೆಗೆ ಕೈಗೊಂಡ ಕ್ರಮಗಳೇನು ಖಾಸಗಿ ವೈದ್ಯ ಕಾಲೇಜುಗಳು ಅಂತಹ ಸೀಟುಗಳನ್ನು ಸರ್ಕಾರಕ್ಕೆ ವಾಪಸ್ ಮಾಡಿದ್ದರೆ ಅಥವಾ ಸರ್ಕಾರ ವಾಪಸ್ ಪಡೆದುಕೊಂಡಿದ್ದರೆ ಅಂತಹ ಸೀಟುಗಳ ಕಾಲೇಜುವಾರು ಸಂಖ್ಯೆ ವಿವರ ಎಷ್ಟು (ಸಮಗ್ರ ಮಾಹಿತಿ ನೀಡುವುದು) ?

## ಇಡಗೂರು ಗ್ರಾಮದಲ್ಲಿ ಆಸ್ಪತ್ರೆ ಸೌಕರ್ಯ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೧೭ (೩೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ಜಿಲ್ಲೆ, ಗುಬ್ಬಿ ತಾಲ್ಲೂಕು, ಇಡಗೂರು ಗ್ರಾಮದಲ್ಲಿ ಆಸ್ಪತ್ರೆ ಯಾವಾಗ ಪ್ರಾರಂಭವಾಯಿತು;

(ಆ) ಈ ಆಸ್ಪತ್ರೆಗೆ ಮಂಜೂರಾದ ವೈದ್ಯರ ಸಂಖ್ಯೆ ಎಷ್ಟು; ಕಾರ್ಯನಿರ್ವಹಿಸುತ್ತಿರುವ ವೈದ್ಯರೆಷ್ಟು; ಒಟ್ಟು ನೌಕರರು ಎಷ್ಟು;

(ಇ) ಈ ಗ್ರಾಮಕ್ಕೆ ಸರಿಯಾಗಿ ಔಷಧ ಸರಬರಾಜು ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಕಾರಣವೇನು;

(ಈ) ನಾಯಿ ಕಡಿತ, ಹಾವು ಕಡಿತ, ತುರ್ತು ಚಿಕಿತ್ಸೆಗೆ ಗಮನ ಹರಿಸದಿರಲು ಕಾರಣವೇನು; ಎಷ್ಟು ದಿನದಲ್ಲಿ ಬಗೆಹರಿಸಲಾಗುವುದು ?

## ಗ್ರಾಮೀಣ ಪ್ರದೇಶಕ್ಕೆ ಹೊಸ ಬಸ್‌ಗಳು.

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೧೮ (೩೬) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮೀಣ ಭಾಗದಲ್ಲಿ ಸಂಚರಿಸುತ್ತಿರುವ ಕೆ.ಎಸ್.ಆರ್.ಟಿ.ಸಿ. ಬಸ್‌ಗಳು ತುಂಬಾ ಹಳೆಯದಾಗಿದ್ದು, ಸಂಚಾರಕ್ಕೆ ಯೋಗ್ಯವಾಗದಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಪ್ರಯಾಣಿಕರಿಗೆ ಎಲ್ಲಾ ಕೆ.ಎಸ್.ಆರ್.ಟಿ.ಸಿ. ಬಸ್‌ಸ್ಟ್ಯಾಂಡ್‌ಗಳಲ್ಲಿ ಶೌಚಾಲಯ ವ್ಯವಸ್ಥೆ ಸಮರ್ಪಕವಾಗಿಲ್ಲದಿರುವುದನ್ನು ಸರ್ಕಾರ ಗಮನಿಸಿದೆಯೇ ;

(ಇ) ಹಾಗಿದ್ದಲ್ಲಿ, ಕೂಡಲೇ ಇದರ ಬಗ್ಗೆ ಗಮನಹರಿಸಿ ವ್ಯವಸ್ಥೆ ಸರಿಪಡಿಸಲಾಗುವುದೆ ;

(ಈ) ಯಾವಾಗ ಸರಿಪಡಿಸಲಾಗುವುದು ?

## ಅಕ್ಕಿ ಸಂರಕ್ಷಿಸಲು ಗೋದಾಮುಗಳ ಸಮಸ್ಯೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೧೯ (೩೭) ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹೊಸ ಅಕ್ಕಿ ನೀತಿ ಯಾವಾಗಿನಿಂದ ಬಂದಿದೆ ;

(ಆ) ಹಾಗಿದ್ದಲ್ಲಿ, ಅಕ್ಕಿಯನ್ನು ಸುರಕ್ಷತೆಯಿಂದ ಕಾಪಾಡಲು ಯಾವ ರೀತಿ ಗೋದಾಮು ವ್ಯವಸ್ಥೆ ಮಾಡಲಾಗಿದೆ ;

(ಇ) ಗೋದಾಮುಗಳನ್ನು ಬಾಡಿಗೆ ಪಡೆಯಲು ಇರುವ ಮಾನದಂಡವೇನು ;

(ಈ) ಯಾವ-ಯಾವ ಜಿಲ್ಲೆ, ತಾಲ್ಲೂಕು ಮಟ್ಟದಲ್ಲಿ ಗೋದಾಮು ಬಾಡಿಗೆ ಪಡೆಯಲಾಗಿದೆ ;

(ಉ) ಸ್ವಂತ ಗೋದಾಮುಗಳು ಎಲ್ಲೆಲ್ಲಿವೆ (ವಿವರ ನೀಡುವುದು) ?

## ಸಾರಿಗೆ ಇಲಾಖೆಯಿಂದ ಮಾಹಿತಿ ಬಗ್ಗೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರಗಳಿಂದ ಚುನಾಯಿತರಾದವರು) :–**

೨೦ (೪೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸಾರಿಗೆ ಇಲಾಖೆಯನ್ನು ಎಷ್ಟು ವಿಭಾಗಗಳನ್ನಾಗಿ ವಿಂಗಡಿಸಲಾಗಿದೆ ;

(ಆ) ಸದರಿ ವಿಭಾಗಗಳ ವ್ಯಾಪ್ತಿಯಲ್ಲಿ ಎಷ್ಟು ಬಸ್ಸುಗಳಿವೆ;

(ಇ) ಈ ವಿಭಾಗಗಳ ವ್ಯಾಪ್ತಿಯಲ್ಲಿ ಕಳೆದ ೫ ವರ್ಷಗಳಲ್ಲಿ ಸಾರಿಗೆ ಇಲಾಖೆಯ ಲಾಭ ನಷ್ಟಗಳೆಷ್ಟು (ವಿಭಾಗವಾರು ಮಾಹಿತಿ ನೀಡುವುದು) ?

## ಹುಬ್ಬಳ್ಳಿ-ಧಾರವಾಡ ನಗರಗಳ ಮಧ್ಯೆ ಮೆಟ್ರೋ ರೈಲು ಸ್ಥಾಪನೆ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೧ (೪೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹುಬ್ಬಳ್ಳಿ-ಧಾರವಾಡ ಅವಳಿ ನಗರವಾಸಿಗಳು ಸೂಕ್ತ ಸಾರಿಗೆ ಸೌಲಭ್ಯಗಳಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಅವಳಿ ನಗರಗಳ ಮಧ್ಯೆ ತುರ್ತು ಸಂಚಾರ ವ್ಯವಸ್ಥೆ ಕಲ್ಪಿಸಲಾಗುವುದೆ;

(ಆ) ಈ ಅವಳಿ ನಗರಗಳಿಗೆ ಮೆಟ್ರೋ ರೈಲು ಸಂಚಾರ ಸೌಲಭ್ಯವನ್ನು ಕಲ್ಪಿಸಲಾಗುವುದೆ; ಹಾಗಿದ್ದಲ್ಲಿ, ಯಾವಾಗ ಕಾರ್ಯಗತ ಗೊಳಿಸಲಾಗುವುದು ?

## ಹುಬ್ಬಳ್ಳಿ-ಧಾರವಾಡ ಡಿಪೋಗಳ ಆಧುನೀಕರಣ

**ಡಾ॥ ಮತ್ತಿಕಟ್ಟೆ ವೀರಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೨೨ (೪೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹುಬ್ಬಳ್ಳಿ-ಧಾರವಾಡ ನಗರಗಳಲ್ಲಿನ ರಾಜ್ಯ ರಸ್ತೆ ಸಾರಿಗೆ ಡಿಪೋಗಳೆಲ್ಲ ಅನಾನುಕೂಲತೆಗಳಿಂದ ಕೂಡಿದ್ದು, ಪ್ರಯಾಣಿಕರಿಗೆ ತೀವ್ರ ತೊಂದರೆಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಇವೆರಡೂ ಡಿಪೋಗಳನ್ನು, ಪ್ರಯಾಣಿಕರನ್ನು ಆಕರ್ಷಿಸುವಂತೆ ಅಭಿವೃದ್ಧಿಪಡಿಸಲಾಗುವುದೇ ;

(ಇ) ಹುಬ್ಬಳ್ಳಿ ನಗರ ಹೊಸೂರು ಬಡಾವಣೆಯಲ್ಲಿನ ಬಸ್ ಡಿಪೋವನ್ನು ಬೆಂಗಳೂರಿನಲ್ಲಿನ ಬಿ.ಎಂ.ಟಿ.ಸಿ ಡಿಪೋಗಳ ಮಾದರಿಯಲ್ಲಿ ವಾಣಿಜ್ಯ ಸಂಕೀರ್ಣವನ್ನೊಳಗೊಂಡಂತೆ ಆಧುನಿಕ ರೀತಿಯಲ್ಲಿ ಅಭಿವೃದ್ಧಿಪಡಿಸಲಾಗುವುದೆ; ಹಾಗಿದ್ದಲ್ಲಿ ಯಾವಾಗ ಕ್ರಮ ಕೈಗೊಳ್ಳಲಾಗುವುದು ?

## ಅನುದಾನ ಬಳಕೆಯಾಗದಿರುವ ಬಗ್ಗೆ

**ಡಾ॥ ಮತ್ತಿಕಟ್ಟೆ ವೀರಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೨೩ (೪೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪ್ರಸಕ್ತ ಸಾಲಿನ ಆಯ-ವ್ಯಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಅಲ್ಪಸಂಖ್ಯಾತರನ್ನೊಳಗೊಂಡಂತೆ ಸಮಾಜ ಕಲ್ಯಾಣ ಇಲಾಖೆಯಲ್ಲಿನ ವಿವಿಧ ಯೋಜನೆಗಳಿಗೆ ಒದಗಿಸಲಾದ ಹಣವೆಷ್ಟು; ಅದರಲ್ಲಿ, ಇಲ್ಲಿಯವರೆವಿಗೆ ಬಳಸದೆ ಉಳಿದಿರುವ ಹಣವೆಷ್ಟು ;

(ಆ) ಹೀಗೆ ಸಾವಿರಾರು ಕೋಟಿ ರೂಪಾಯಿಗಳಿಗೆ ಅನುದಾನ ಬಳಕೆಯಾಗದೇ ಉಳಿದಲ್ಲಿ ಏನು ಸಾಧನೆ ಮಾಡಿದಂತಾಗುತ್ತದೆ; ಇದಕ್ಕೆಲ್ಲ ಜವಾಬ್ದಾರಿಯುತ ಅಧಿಕಾರಿಗಳನ್ನು ಗುರುತಿಸಿ ಶಿಸ್ತು ಕ್ರಮ ಕೈಗೊಳ್ಳಲಾಗುವುದೆ ?

## ಉತ್ತರ ಕರ್ನಾಟಕ ವಿದ್ಯಾರ್ಥಿಗಳಿಗೆ ಹೆಚ್ಚಿನ ವೈದ್ಯಕೀಯ ಸೌಲಭ್ಯಗಳು

**ಡಾ॥ ಮತ್ತಿಕಟ್ಟೆ ವೀರಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೨೪ (೪೫) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಉತ್ತರ ಕರ್ನಾಟಕದಲ್ಲಿನ ವಿದ್ಯಾರ್ಥಿಗಳಿಗೆ ಉನ್ನತ ವೈದ್ಯಕೀಯ ಶಿಕ್ಷಣ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಗದಗದಲ್ಲಿ ವೈದ್ಯಕೀಯ ಶಿಕ್ಷಣ ಮಹಾವಿದ್ಯಾಲಯ ಸ್ಥಾಪಿಸಲು ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; ಈ ದಿಸೆಯಲ್ಲಿ ಸಾಧಿಸಲಾದ ಪ್ರಗತಿ ಏನು ;

(ಇ) ವೈದ್ಯಕೀಯ ಚಿಕಿತ್ಸಾ ಸೌಲಭ್ಯಗಳಿಂದ ವಂಚಿತರಾಗಿರುವ ಈ ಭಾಗದ ರೋಗಿಗಳಿಗೆ ಹೃದ್ರೋಗ ಮೂತ್ರಪಿಂಡ ಕಾಯಿಲೆ ಮತ್ತು ಮಧುಮೇಹ ಮುಂತಾದ ಕಾಯಿಲೆಗಳಿಗೆ ಚಿಕಿತ್ಸೆಗಾಗಿ ಆಧುನಿಕ ಸೌಲಭ್ಯಗಳನ್ನು ಒದಗಿಸಲಾಗುವುದೆ ?

ವಿ. ಶ್ರೀಶ್
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಘಟಕ-2, ಬೆಂ-59/ಕಾ.ಸೂ. 3341/1000 ಪ್ರತಿಗಳು/19-06-2014